# ಡಿ.ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮ ನಿಯಮಿತ

ದೇವರಾಜ ಅರಸು ಭವನ, 4ನೇ ಮಹಡಿ, ನಂ 16ಡಿ, ಮಿಲ್ಲರ್ ಟ್ಯಾಂಕ್ ಬೆಡ್ ಏರಿಯಾ, ವಸಂತನಗರ, ಬೆಂಗಳೂರು- 52

ಸಂಖ್ಯೆ: ದೇಹಿನಿ/ಸ/ಕ್ರಿಯೋ/ಸಿಆರ್-1/2021-22 ದಿನಾಂಕ:25/11/2021

## ಪ್ರಕಟಣೆ

**ಡಿ.ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮದಿಂದ 2021-22ನೇ ಸಾಲಿನಲ್ಲಿ ಈ ಕೆಳಕಂಡ ಯೋಜನೆಗಳಲ್ಲಿ ಅರ್ಜಿ ಆಹ್ವಾನಿಸಲಾಗಿದೆ.**

### I. ಸುವಿಧಾ ತಂತ್ರಾಂಶದ ಮುಖಾಂತರ Online ಅರ್ಜಿ ಸ್ವೀಕೃತಿ

❖ **ಅರಿವು ಶೈಕ್ಷಣಿಕ ಸಾಲ ಯೋಜನೆ ನವೀಕರಣ( Renewal)**

**ಡಿ.ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮದಿಂದ ಹಿಂದುಳಿದ ವರ್ಗಗಳಿಗೆ** ಸೇರಿದ ವಿದ್ಯಾರ್ಥಿಗಳಿಗೆ ಈಗಾಗಲೇ ಕಳೆದ ಸಾಲಿನಲ್ಲಿ ಅರಿವು ಶೈಕ್ಷಣಿಕ ಸಾಲ ಯೋಜನೆಯಡಿಯಲ್ಲಿ ಸೌಲಭ್ಯ ಪಡೆದ ವಿದ್ಯಾರ್ಥಿಗಳಿಗೆ 2021-22ನೇ ಸಾಲಿನಲ್ಲಿ ವ್ಯಾಸಂಗ ಮಾಡುತ್ತಿದ್ದಲ್ಲಿ ಮುಂದುವರೆದ ಕಂತುಗಳಿಗೆ (3,4,5ನೇ ಕಂತುಗಳು) ಸುವಿಧಾ ತಂತ್ರಾಂಶದಲ್ಲಿ ಆನ್‌ಲೈನ್ ಮೂಲಕ ಅರ್ಜಿಗಳನ್ನು ಆಹ್ವಾನಿಸಲಾಗಿದೆ. ಅರ್ಜಿದಾರರು ಆಧಾರ್ ಜೋಡಣೆಯಾದ ಚಾಲ್ತಿಯಲ್ಲಿರುವ ಬ್ಯಾಂಕ್ ಖಾತೆ ಹೊಂದಿರಬೇಕು. https://suvidha.karnataka.gov.in ಜಾಲತಾಣದೊಂದಿಗೆ ಅರ್ಜಿಯನ್ನು ಸಲ್ಲಿಸಬಹುದು. ಈ ಯೋಜನೆಗೆ ಸಂಬಂಧಿಸಿದಂತೆ, ಹೆಚ್ಚಿನ ಮಾಹಿತಿಗೆ ಹಾಗೂ ಸಲ್ಲಿಸಬೇಕಾಗಿರುವ ದಾಖಲೆಗಳ ಬಗ್ಗೆ ಜಿಲ್ಲಾ ವ್ಯವಸ್ಥಾಪಕರ ಕಛೇರಿ ಅಥವಾ ನಿಗಮದ https://dbcdc.karnataka.gov.in. ಜಾಲತಾಣದಲ್ಲಿ ಮಾಹಿತಿಯನ್ನು ಪಡೆಯಬಹುದು.

### II. ಈ ಹಿಂದಿನಂತೆಯೇ ನೇರವಾಗಿ ಅರ್ಜಿ ಸ್ವೀಕೃತಿ (Offline)

❖ **ಡಿ.ದೇವರಾಜ ಅರಸು ಸ್ವಯಂ ಉದ್ಯೋಗ ವೈಯಕ್ತಿಕ ಸಾಲ ಯೋಜನೆ:**

ಈ ಯೋಜನೆಯಡಿಯಲ್ಲಿ ಸೌಲಭ್ಯ ಪಡೆಯ ಬಯಸುವ ಹಿಂದುಳಿದ ವರ್ಗಗಳ ಅರ್ಜಿದಾರರು ಈ ಹಿಂದಿನಂತೆಯೆ ಅವರು ವಾಸಿಸುತ್ತಿರುವ ಆಯಾ ಜಿಲ್ಲೆಯ ನಿಗಮದ ಜಿಲ್ಲಾ ವ್ಯವಸ್ಥಾಪಕರ ಕಛೇರಿ, ಹಾಗೂ ನಿಗಮದ ವೆಬ್‌ಸೈಟ್‌ನ್ನು ಸಂಪರ್ಕಿಸಿ ಅರ್ಜಿ ನಮೂನೆಗಳನ್ನು ಪಡೆದು ಅಗತ್ಯ ದಾಖಲಾತಿಗಳನ್ನು ಭರ್ತಿ ಮಾಡಿ ಜಿಲ್ಲಾ ಕಛೇರಿಗಳಿಗೆ ನೇರವಾಗಿ ಸಲ್ಲಿಸಬೇಕು. ಈ ಯೋಜನೆ ಸೌಲಭ್ಯ ಪಡೆಯಲು ಸ್ವಯಂ ಉದ್ಯೋಗಕ್ಕಾಗಿ ಆರ್ಥಿಕ ಚಟುವಟಿಕೆ ಕೈಗೊಳ್ಳಲು ಗರಿಷ್ಠ ರೂ.**2.00**ಲಕ್ಷಗಳ ವರೆಗೆ ಆರ್ಥಿಕ ನೆರವು ಇದರಲ್ಲಿ ಗರಿಷ್ಠ ಶೇ.15ರಷ್ಟು ಸಹಾಯಧನ, ಉಳಿಕೆ ಮೊತ್ತ ವಾರ್ಷಿಕ ಶೇ.4ರ ಬಡ್ಡಿದರದಲ್ಲಿ ಸಾಲ ಸೌಲಭ್ಯ ಪಡೆಯ ಬಯಸುವವರು ಹಿಂದುಳಿದ ವರ್ಗಗಳ ಪ್ರವರ್ಗ-1, 2ಎ, 3ಎ ಮತ್ತು 3ಬಿಗೆ (ವಿಶ್ವಕರ್ಮ, ಉಪ್ಪಾರ, ಅಂಬಿಗ, ಸವಿತಾ, ಮಡಿವಾಳ, ಅಲೆಮಾರಿ ಮತ್ತು ಅರೆ ಅಲೆಮಾರಿ ಸಮುದಾಯ, ಒಕ್ಕಲಿಗ, ಲಿಂಗಾಯತ, ಕಾಡುಗೊಲ್ಲ, ಹಟ್ಟಿಗೊಲ್ಲ, ಮರಾಠ, ಮತ್ತು ಇದರ ಉಪ ಸಮುದಾಯಗಳು ಹೊರತುಪಡಿಸಿ) ಸೇರಿದವರಾಗಿರಬೇಕು. ಕುಟುಂಬದ ವಾರ್ಷಿಕ ವರಮಾನ ಗ್ರಾಮಾಂತರ ಪ್ರದೇಶದವರಿಗೆ ರೂ.40,000/-ಗಳು ಪಟ್ಟಣ ಪ್ರದೇಶದವರಿಗೆ ರೂ.55,000/-ಗಳ ಒಳಗಿರಬೇಕು, ಅರ್ಜಿದಾರರ ವಯಸ್ಸು 18 ರಿಂದ 55 ವರ್ಷಗಳ ಮಿತಿಯಲ್ಲಿರಬೇಕು, ಅರ್ಜಿ ಸಲ್ಲಿಸುವಾಗ ಆಧಾರ್ ಕಾರ್ಡ್ ಜೋಡಣೆಯಾದ ಚಾಲ್ತಿಯಲ್ಲಿರುವ ಬ್ಯಾಂಕ್ ಖಾತೆ ಹೊಂದಿರಬೇಕು, ಚಾಲ್ತಿಯಲ್ಲಿರುವ ಜಾತಿ ಆದಾಯ ಪ್ರಮಾಣ ಪತ್ರ ನೀಡುವುದು.

**ಒಂದು ಬಾರಿ ನಿಗಮದ ಯಾವುದಾದರೂ ಯೋಜನೆಯಲ್ಲಿ ಪ್ರಯೋಜನ ಪಡೆದಿದ್ದಲ್ಲಿ ಅಂತಹವರು ಹಾಗೂ ಅವರ ಕುಟುಂಬದವರು ಮತ್ತೊಮ್ಮೆ ಸೌಲಭ್ಯ ಕೋರಿ ಅರ್ಜಿ ಸಲ್ಲಿಸಲು ಅರ್ಹರಿರುವುದಿಲ್ಲ. ಅಂತಹ ಅರ್ಜಿಗಳನ್ನು ತಿರಸ್ಕರಿಸಲಾಗುವುದು.**

ಮೇಲ್ಕಂಡ ಸೌಲಭ್ಯಗಳನ್ನು ಪಡೆಯಲು ಇಚ್ಛಿಸುವ ಹಿಂದುಳಿದ ವರ್ಗದ ಅರ್ಜಿದಾರರು ನಿಗಮದ ವೆಬ್‌ಸೈಟ್ **www.dbcdc.karnataka.gov.in** ಇಲ್ಲಿ ಸಂಪರ್ಕಿಸಬಹುದಾಗಿರುತ್ತದೆ. ಹೆಚ್ಚಿನ ಮಾಹಿತಿಯನ್ನು ಪಡೆಯಲು **ನಿಗಮದ ಸಹಾಯವಾಣಿ ಸಂಖ್ಯೆ:080-22374832** ಅಥವಾ ಆಯಾ ಜಿಲ್ಲಾ ಕಛೇರಿಯ ದೂರವಾಣಿ ಸಂಖ್ಯೆಗಳನ್ನು ವೆಬ್‌ಸೈಟ್‌ನಲ್ಲಿ ನೀಡಲಾಗಿದ್ದು ಅದರಂತೆ ಸಂಪರ್ಕಿಸಬಹುದು. ***ಭರ್ತಿ ಮಾಡಿದ ಅರ್ಜಿಗಳನ್ನು ಅಗತ್ಯ/ದಾಖಲಾತಿಗಳೊಂದಿಗೆ ದಿನಾಂಕ:10-01-2022 ರೊಳಗೆ ಸಲ್ಲಿಸುವುದು.***

25/11/2021

(ವಿ.ರವಿ)

ವ್ಯವಸ್ಥಾಪಕ ನಿರ್ದೇಶಕರು.